ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಬೆಡ್‌ಗಳ ಕೊರತೆಯಿಂದ ರೋಗಿಗಳು ಸಾವನ್ನಪ್ಪಿರುವ ಬಗ್ಗೆ

ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

822 (945) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಪ್ರಸ್ತುತ ಎಷ್ಟು ಆರೋಗ್ಯ ಕೇಂದ್ರಗಳಿವೆ ;

(ಆ) ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಕೊರೋನಾ ಪರೀಕ್ಷೆ ಮಾಡಿ ಕೊರೋನಾ ಪರೀಕ್ಷೆ ಶುಲ್ಕವನ್ನು ಪಾವತಿಸಿಕೊಳ್ಳಲಾಗಿದೆಯೇ ; ಪಾವತಿಸಿಕೊಂಡಿದ್ದಲ್ಲಿ, ಒಬ್ಬ ರೋಗಿಯ ಪರೀಕ್ಷೆಗೆ ಎಷ್ಟು ಶುಲ್ಕವನ್ನು ನಿಗದಿಪಡಿಸಲಾಗಿತ್ತು ;

(ಇ) ಕೊರೋನಾ ಸಂದರ್ಭದಲ್ಲಿ ರೋಗಿಗಳು ಬೆಡ್‌ಗಳ ಕೊರತೆಯಿಂದ ಸಕಾಲಕ್ಕೆ ಚಿಕಿತ್ಸೆ ಸಿಗದೆ ಮರಣ ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಉ) ಕೊರೋನಾ ಸಂದರ್ಭದಲ್ಲಿ ಆಂಬುಲೆನ್ಸ್‌ಗಳ ಕೊರತೆ ನೀಗಿಸಲು ಸರ್ಕಾರ ಯಾವ ರೀತಿ ಪರಿಹಾರ ಕ್ರಮ ಕೈಗೊಂಡಿದೆ ? (ವಿವರ ನೀಡುವುದು)